**ಜಿಲ್ಲಾಧಿಕಾರಿಗಳ ಕಾರ್ಯಾಲಯ, ಕಂದಾಯ ಇಲಾಖೆ, ಕಲಬುರಗಿ ಜಿಲ್ಲೆ**

**ಸಂಖ್ಯೆ:** ಕಂದಾಯ/ ಸಿಬ್ಬಂದಿ-1/ ಗ್ರಾಲೇನೇಮಕಾತಿ/ 17/ 2015-16 **ದಿನಾಂಕ:** 28.09.2015

**ಪ್ರಕಟಣೆ**

ವಿಷಯ :- ಕಲಬುರಗಿ ಜಿಲ್ಲೆಯ ಕಂದಾಯ ಇಲಾಖೆಯಲ್ಲಿ ಖಾಲಿ ಇರುವ ಗ್ರಾಮಲೆಕ್ಕಾಧಿಕಾರಿಗಳ ಹುದ್ದೆಗಳ ನೇರ ನೇಮಕಾತಿ ಸಂಬಂಧ ಅಭ್ಯರ್ಥಿಗಳ ತಾತ್ಕಾಲಿಕ ಹಾಗೂ ಕಾಯ್ದಿರಿಸಿದ ಅಭ್ಯರ್ಥಿಗಳ ಪಟ್ಟಿ ಪ್ರಕಟಿಸುವ ಬಗ್ಗೆ.

ಉಲ್ಲೇಖ:- 1. ಈ ಕಾರ್ಯಾಲಯದ ಅಧಿಸೂಚನೆ ಸಮ ಸಂಖ್ಯೆ ದಿನಾಂಕ 27.06.2015.
2. ಈ ಕಾರ್ಯಾಲಯದ ಪ್ರಕಣೆ ಸಮ ಸಂಖ್ಯೆ ದಿನಾಂಕ 29.08.2015.

**000**

ಕಲಬುರಗಿ ಜಿಲ್ಲೆಯ ಕಂದಾಯ ಇಲಾಖೆಯಲ್ಲಿ ಖಾಲಿ ಇರುವ 30 ಗ್ರಾಮ ಲೆಕ್ಕಾಧಿಕಾರಿಗಳ ಹುದ್ದೆಗಳಿಗೆ ನೇರ ನೇಮಕಾತಿಗಾಗಿ ಉಲ್ಲೇಖ-1 ರ ಆದೇಶದ ಮೂಲಕ ಅರ್ಜಿಗಳನ್ನು ಅಹ್ವಾನಿಸಲಾಗಿತ್ತು. ಉಲ್ಲೇಖ-2 ರ ಮೂಲಕ ಆನ್ ಲೈನ್ ಮೂಲಕ ಸ್ವೀಕೃತವಾದ ಅರ್ಜಿಗಳನ್ನು ಪರೀಶೀಲಿಸಿ ಅರ್ಹ ಅಭ್ಯರ್ಥಿಗಳ ನೇಮಕಾತಿ ಕುರಿತು 1:5 ಅನುಪಾತದಲ್ಲಿ ಮೆರಿಟ್ ಹಾಗೂ ಮಿಸಲಾತಿ ಅನ್ವಯ ಅರ್ಹ ಅಭ್ಯರ್ಥಿಗಳ ತಾತ್ಕಾಲಿಕ ಪಟ್ಟಿಯನ್ನು ಅನುಭಂದಗಳಲ್ಲಿ ಉಲ್ಲೇಖ-2 ರ ಮೂಲಕ ಪ್ರಕಟಿಸಲಾಗಿತ್ತು. ಅದರಂತೆ ಉಲ್ಲೇಖ-3 ರಲ್ಲಿ ಸಂಬಂದಪಟ್ಟ ಅಭ್ಯರ್ಥಿಗಳು ದಿನಾಂಕ 19.09.2015 ರಂದು ಮೂಲ ದಾಖಲೆಗಳನ್ನು ಈ ಕಛೇರಿಯ ನಿರ್ದಿಷ್ಟಪಡಿಸಿದ ಸಿಬ್ಬಂದಿಗಳಿಗೆ ಅಭ್ಯರ್ಥಿಗಳು ತಮ್ಮ ಮೂಲ ದಾಖಲೆಗಳನ್ನು ಪರಿಶೀಲನೆಗಾಗಿ ಹಾಜರಾಗುವಂತೆ ತಿಳಿಸಲಾಗಿತ್ತು. ಅದರಂತೆ ಹಾಜರಾದ ಅಭ್ಯರ್ಥಿಗಳ ಪರಿಶೀಲನೆ ನಂತರ ತಾತ್ಕಾಲಿಕ ಆಯ್ಕೆ ಪಟ್ಟಿ 1:1 ಅನುಪಾತ ಹಾಗೂ ಕಾಯ್ದಿರಿಸಿದ ಪಟ್ಟಿಯನ್ನು ಜಿಲ್ಲಾಧಿಕಾರಿಗಳ ಕಲಬುರಗಿ ಇವರ ಕಾರ್ಯಾಲಯದಲ್ಲಿ ಹಾಗೂ ವೆಬ್ ಸೈಟ್ ನಲ್ಲಿ kalaburagi-va.kar.nic.in ರಲ್ಲಿ ಪ್ರಚುರ ಪಡಿಸಲಾಗಿದೆ. ಸದರಿ ತಾತ್ಕಾಲಿಕ ಆಯ್ಕೆ ಪಟ್ಟಿಗೆ ಆಕ್ಷೇಪಣಾ ಮತ್ತು ತಕರಾರುಗಳನ್ನು ಸಲ್ಲಿಸಲು ದಿನಾಂಕ 19.10.2015 ರವರೆಗೆ ಅವಧಿ ನಿಗಧಿಪಡಿಸಲಾಗಿದೆ. ಆಕ್ಷೇಪಣಾ ಮತ್ತು ತಕರಾರುಗಳನ್ನು ಲಿಖಿತ ರೂಪದಲ್ಲಿ ನೇರವಾಗಿ ಈ ಕಾರ್ಯಾಲಯಕ್ಕೆ ಸಲ್ಲಿಸಲು ತಿಳಿಸಿದೆ. ಅವಧಿ ಮುಗಿದ ನಂತರ ಆಕ್ಷೇಪಣಾ ಮತ್ತು ತಕರಾರುಗಳನ್ನು ಪರಿಗಣಿಸಲಾಗುವುದಿಲ್ಲ. ಆಕ್ಷೇಪಣೇಗಳನ್ನು ನಿಯಮಾನುಸಾರ ಪರಿಶೀಲಿಸಿದ ನಂತರ ಅಂತಿಮ ಆಯ್ಕೆ ಪಟ್ಟಿಯನ್ನು 1:1 ಅನುಪಾತದಲ್ಲಿ ಅರ್ಹ ಅಭ್ಯರ್ಥಿಗಳ ಪಟ್ಟಿಯನ್ನು ಮತ್ತು ಕಾಯ್ದಿರಿಸಿದ ಪಟ್ಟಿಯನ್ನು ಅಂತರ ಜಾಲದಲ್ಲಿ ಪ್ರಕಟಿಸಲಾಗುವುದು.

**ಜಿಲ್ಲಾಧಿಕಾರಿಗಳು ಮತ್ತು ಅಧ್ಯಕ್ಷರು**
**ಗ್ರಾಮಲೆಕ್ಕಿಗರ ನೇಮಕಾತಿ ಪ್ರಾಧಿಕಾರ**
**ಕಲಬುರಗಿ ಜಿಲ್ಲೆ ಕಲಬುರಗಿ.**

ಪ್ರತಿಯನ್ನು:-

1) ಡಿಐಓ, ಎನ್‌ಐಸಿ ಕಲಬುರಗಿ ಇವರಿಗೆ ಸದರಿ ಅಧಿಕೃತ ಜ್ಞಾಪನ ಹಾಗೂ ತಿರಸ್ಕರಿಸಿದ ಅರ್ಜಿಗಳ ಪಟ್ಟಿಯನ್ನು ವೆಬ್ ಸೈಟ್‌ನಲ್ಲಿ ಪ್ರಕಟಿಸಲು ಕೋರಿದೆ.
2) ಈ ಕಛೇರಿಯ ಸೂಚನಾ ಫಲಕದಲ್ಲಿ ಪ್ರಕಟಿಸಲು.
3) ಹೆಚ್ಚಿನ ಪ್ರತಿ